**<u>2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು</u>**

**<u>ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.</u>**

**ದಿಃ 31.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಎದುರುದಾರರ ಪರ ವಕೀಲರಿಂದಃ**

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ಎದುರುದಾರ ನಂ.2 ಕಂಪನಿಯವರು ನನಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಆರ್.1 ಎಂದು, ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಆರ್.2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ಅಪಘಾತವಾದ ಸಮಯದಲ್ಲಿ ವಾಹನ ನಂ.ಕೆಎ-63/3190 ಇದಕ್ಕೆ ನೀಡಲಾದ ವಿಮಾ ಪಾಲಿಸಿ ಚಾಲ್ತಿಯಲ್ಲಿತ್ತು. ಅಪಘಾತವಾದ ದಿನ ವಿಮಾ ಪಾಲಿಸಿ ಚಾಲ್ತಿಯಲ್ಲಿರುವ ಕಾರಣ ಅರ್ಜಿದಾರರಿಗೆ ನಾವು ಪರಿಹಾರ ಕೊಡಲು ಬಾದ್ಯಸ್ಥರು ಎಂದರೆ ಸರಿ.

**(ಎದುರುದಾರ ನಂ.1 ಗೈರು ಹಾಜರಿದ್ದು ಅವರ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು).**

**ಮರುವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**